ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 845(805)
ಸದಸ್ಯರ ಹೆಸರು : ಶ್ರೀ ಕೆ.ಟಿ ಶ್ರೀಕಂಠೇಗೌಡ (ಪದವೀಧರ ಕ್ಷೇತ್ರ)
ಉತ್ತರಿಸುವ ದಿನಾಂಕ : 20-09-2021
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು.

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದ ಖಾಸಗಿ ಅನುದಾನಿತ ಶಾಲಾ-ಕಾಲೇಜುಗಳ ಸಂಖ್ಯೆ ಎಷ್ಟು; ಸದರಿ ಶಾಲಾ-ಕಾಲೇಜುಗಳಲ್ಲಿ ವಿವಿಧ ಕಾರಣಗಳಿಂದ ತೆರವಾದ ಹುದ್ದೆಗಳ ಭರ್ತಿಗೆ ಅವಕಾಶವನ್ನು ಯಾವ ವರ್ಷದವರೆಗೆ ಕಲ್ಪಿಸಲಾಗಿದೆ. (ವಿವರ ನೀಡುವುದು)</td><td>ರಾಜ್ಯದಲ್ಲಿರುವ ಅನುದಾನಿತ ಪ್ರಾಥಮಿಕ, ಪ್ರೌಢ, ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಈ ಕೆಳಕಂಡಂತಿದೆ.
<table>
<tr><td>ಪ್ರಾಥಮಿಕ ಶಾಲೆಗಳು:</td><td>2929</td></tr>
<tr><td>ಪ್ರೌಢ ಶಾಲೆಗಳು:</td><td>3767</td></tr>
<tr><td>ಪದವಿಪೂರ್ವ ಕಾಲೇಜುಗಳು:</td><td>799</td></tr>
</table>
ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಸುತ್ತೋಲೆ ಸಂಖ್ಯೆ:ಇಡಿ 267 ಪಿಎಂಸಿ 2007, ದಿನಾಂಕ:12.10.2007ರನ್ವಯ ನಿಧನ, ನಿವೃತ್ತಿ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಖಾಲಿಯಾದ ಅಂತಹ ಖಾಲಿ ಹುದ್ದೆಗಳನ್ನು ಹೆಚ್ಚುವರಿ ಶಿಕ್ಷಕರಿಂದ ಮಾತ್ರ ತುಂಬಿಕೊಳ್ಳಬೇಕೆ ಹೊರತು ನೇರ ನೇಮಕಾತಿ ಮಾಡಿಕೊಳ್ಳತಕ್ಕದ್ದಲ್ಲ ಎಂದು ಸೂಚಿಸಲಾಗಿರುತ್ತದೆ ಆದ್ದರಿಂದ ಅಂತಹ ಖಾಲಿ ಹುದ್ದೆಗಳಿಗೆ ಹೆಚ್ಚುವರಿ ಶಿಕ್ಷಕರನ್ನು ತುಂಬಿಕೊಳ್ಳಲು ಮಾತ್ರ ಅವಕಾಶ ಕಲ್ಪಿಸಿದೆ.

ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ 157 ವೆಚ್ಚ-8 ದಿನಾಂಕ 10-06-2020ರಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ ಪ್ರಸ್ತಾವನೆಗಳನ್ನು 2020-21ನೇ ಸಾಲಿನಲ್ಲಿ ಭರ್ತಿ ಮಾಡದಿರಲು ನಿರ್ದೇಶನ ನೀಡಲಾಗಿದೆ.
ಆದರೆ, ದಿನಾಂಕ:31-12-2015ರ ಪೂರ್ವದಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಖಾಲಿಯಿರುವ ಹುದ್ದೆಗಳ ಪೈಕಿ ಈಗಾಗಲೇ ಇಲಾಖೆಯಿಂದ ಅನುಮೋದನೆಗೊಂಡು ನೇಮಕಾತಿ ಪ್ರಕ್ರಿಯೆಯು ಇಲಾಖೆಯ ಹಂತದಲ್ಲಿ ಬಾಕಿಯಿರುವ ಅನುದಾನಿತ ಪ್ರೌಢಶಾಲೆಯ 257 ಭೋದಕ ಹುದ್ದೆಗಳನ್ನು ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜುಗಳ 173 ಭೋದಕ ಹುದ್ದೆಗಳಿಗೆ 2021-22ನೇ ಶೈಕ್ಷಣಿಕ ವರ್ಷ ಪ್ರಾರಂಭಗೊಂಡ ನಂತರ ನೇಮಕಾತಿ ಆದೇಶವನ್ನು ನೀಡಲು ಆರ್ಥಿಕ ಇಲಾಖೆ ಸಹಮತಿ ನೀಡಿದ್ದು, ಅದರನ್ವಯ ಕ್ರಮವಹಿಸಲು ಅನುಮೋದನೆ ನೀಡಲಾಗಿದೆ.</td></tr>
</table>

ಆ	ಕೋವಿಡ್-19ರ ಕಾರಣದಿಂದ ಕಳೆದ 2 ವರ್ಷಗಳಲ್ಲಿ ಈ ಸಂಸ್ಥೆಗಳಲ್ಲಿರುವ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ತಡೆಹಿಡಿದಿರುವುದರಿಂದ ಅಭ್ಯರ್ಥಿಗಳ ವಯೋಮಿತಿ ಮೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಇಲ್ಲ.
ಇ	ಬಂದಿದ್ದಲ್ಲಿ, ಈ ಅಭ್ಯರ್ಥಿಗಳ ನೇಮಕಾತಿಯಲ್ಲಿ 2 ವರ್ಷಗಳ ಕಾಲ ವಯೋಮಿತಿ ಸಡಿಲಿಕೆ ಮಾಡಲು ಸರ್ಕಾರ ಚಿಂತಿಸುವುದೆ; (ಮಾಹಿತಿ ನೀಡುವುದು)	ಉದ್ಭವಿಸುವುದಿಲ್ಲ.
ಈ	ಈ ಬಗ್ಗೆ ಸರ್ಕಾರದ ನಿಲುವೇನು? (ಮಾಹಿತಿ ನೀಡುವುದು)	

ಇಪಿ 331 ಎಸ್‌ಇಎಸ್ 2021

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು